ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 17/9/19

### ಹಲವು ಯೋಜನೆ ಪ್ರಕಟಿಸಿದ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ

# ಪರಿಶಿಷ್ಟರ ಕಲ್ಯಾಣಕ್ಕೆ ₹30 ಸಾವಿರ ಕೋಟಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: 2019-20ರ ಸಾಲಿಗೆ ವಿವಿಧ ಇಲಾಖೆಗಳಲ್ಲಿರುವ ಎಸ್‌ಸಿ ಎಸ್‌ಟಿ ಅನುದಾನದ ಅಡಿ ₹30,444 ಕೋಟಿ ವೆಚ್ಚದ ಕ್ರಿಯಾ ಯೋಜನೆಗೆ ಸಮಾಜ ಕಲ್ಯಾಣ ಇಲಾಖೆಯ ರಾಜ್ಯ ಪರಿಷತ್ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ರಾಜ್ಯ ಪರಿಷತ್ ಸಭೆಯ ಬಳಿಕ ಮಾತನಾಡಿ, ಪರಿಶಿಷ್ಟ ಜಾತಿಗೆ ₹21,602 ಕೋಟಿ ಮತ್ತು ಪರಿಶಿಷ್ಟ ವರ್ಗಕ್ಕೆ ₹8,842 ಕೋಟಿ ನಿಗದಿ ಮಾಡಲಾಗಿದೆ ಎಂದರು

ವಿವಿಧ ಇಲಾಖೆಗಳಲ್ಲಿ ಖರ್ಚಾಗದೇ ಉಳಿಕೆಯಾಗಬಹುದಾದ ಅನುದಾನವನ್ನು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರಿಗೆ ಮನೆಗಳ ನಿರ್ಮಾಣ ಮತ್ತು ಮೂಲಭೂತ ಸೌಕರ್ಯಕ್ಕಾಗಿ ಬಳಸಲು ತೀರ್ಮಾನಿಸಲಾಗಿದೆ. ವಿವಿಧ ಇಲಾಖೆಗಳಿಂದ ₹1157.55 ಕೋಟಿ ಉಳಿಕೆಯಾಗಬಹುದು ಎಂದು ಅಂದಾಜು ಮಾಡಲಾಗಿದೆ ಎಂದರು.

ನಗರ ಸ್ಥಳೀಯ ಸಂಸ್ಥೆಗಳಿಗೆ ಎಸ್‌ಸಿಎಸ್‌ಟಿ ಅನುದಾನದಲ್ಲಿ ಶೇ 50 ರಷ್ಟನ್ನು ಈ ವರ್ಗದವರ ಮನೆಗಳ ನಿರ್ಮಾಣಕ್ಕಾಗಿಯೇ ಉಪಯೋಗಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಹಿಂದಿನ ಸರ್ಕಾರ ಈ ಅನುದಾನವನ್ನು ಬೇರೆ ಯೋಜನೆಗಳಿಗೆ ವರ್ಗಾಯಿಸಿದ್ದನ್ನು ಯಡಿಯೂರಪ್ಪ ಸರ್ಕಾರ ಸರಿಪಡಿಸಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಸಮಾಜ ಕಲ್ಯಾಣ ಸಚಿವ ಗೋವಿಂದ ಕಾರಜೋಳ ತಿಳಿಸಿದರು.

## ಸಭೆಯ ಪ್ರಮುಖ ನಿರ್ಧಾರ

- ಕೃಷಿ ಯಂತ್ರೋಪಕರಣಗಳು ಮತ್ತು ಹನಿ ನೀರಾವರಿ ಉಪಕರಣಗಳ ಖರೀದಿಗೆ ಶೇ 90 ರಷ್ಟು ಸಬ್ಸಿಡಿ.
- ಪಶುಸಂಗೋಪನೆ ಇಲಾಖೆ ವತಿಯಿಂದ ಹಸು, ಮೇಕೆ, ಕುರಿ ಖರೀದಿಗೆ ಶೇ 90ರಷ್ಟು ಸಹಾಯಧನ.
- ರೇಷ್ಮೆ ಸಾಕಾಣಿಕೆ ಶೆಡ್‌ಗಳನ್ನು ನಿರ್ಮಿಸಲು, ತೋಟಗಾರಿಕೆ ಸಾಧನಗಳ ಖರೀದಿ, ತೋಟಗಾರಿಕೆ ಪಾಲಿ ಹೌಸ್ ನಿರ್ಮಾಣಕ್ಕೆ ಶೇ 90 ರಷ್ಟು ಪ್ರೋತ್ಸಾಹ ಧನ.
- 30 ಸಾವಿರ ದೇವದಾಸಿಯರಿಗೆ ಪಿಂಚಣಿ ವಿತರಣೆಗೆ ನಿರ್ಧಾರ.
- ಸ್ವ- ಸಹಾಯ ಗುಂಪುಗಳಿಗೆ ₹5 ಲಕ್ಷದವರೆಗೆ ಬಡ್ಡಿ ರಹಿತ ಸಾಲ ವಿತರಣೆ.
- 50 ಕ್ಕೂ ಹೆಚ್ಚು ಪರಿಶಿಷ್ಟ ಜಾತಿ ಮತ್ತು ವರ್ಗಗಳ ವಿದ್ಯಾರ್ಥಿಗಳಿರುವ ಕಾಲೇಜು ಅಥವಾ ಹಾಸ್ಟೆಲ್‌ಗಳಲ್ಲಿ ಕಂಪ್ಯೂಟರ್ ಲ್ಯಾಬ್‌ಗಳ ಸ್ಥಾಪನೆ.
- ಪೌರ ಕಾರ್ಮಿಕರಿಗೆ ಮನೆ ಕಟ್ಟಿಕೊಳ್ಳಲು ₹ 6 ಲಕ್ಷದವರೆಗೆ ಸಹಾಯ ಧನ.

## ವರದಿ ಕೇಳಿದ ಯಡಿಯೂರಪ್ಪ

ಎಸ್‌ಸಿ ಎಸ್‌ಟಿಗಳಿಗೆ ಅನುದಾನದ ದುರ್ಬಳಕೆ ಆಗಿದೆಯೇ ಎಂಬ ಬಗ್ಗೆ ವರದಿಯನ್ನು ನೀಡುವಂತೆ ಮುಖ್ಯಮಂತ್ರಿ ಯಡಿಯೂರಪ್ಪ ಅಧಿಕಾರಿಗಳಿಗೆ ಸೂಚಿಸಿದರು.

'ಈ ಯೋಜನೆಯಡಿ ಅಕ್ರಮ ನಡೆದಿದೆ ಎಂಬ ದೂರುಗಳು ಕೇಳಿ ಬಂದಿವೆ. ಮೂಲ ಉದ್ದೇಶಕ್ಕೆ ಅನುಗುಣವಾಗಿಯೇ ಅನುದಾನ ಬಳಸಲಾಗಿದೆಯೇ, ಎಲ್ಲೆಲ್ಲಿ ಲೋಪಗಳು ಆಗಿವೆ ಎಂಬುದನ್ನು ಪತ್ತೆ ಹಚ್ಚಬೇಕು ಎಂದು ಕಟ್ಟಪ್ಪಣೆ ಮಾಡಿದರು' ಎಂದು ಮೂಲಗಳು ತಿಳಿಸಿವೆ.

5